**Akashvani : Bangalore**
**Regional Bulletin In Kannada**
**14.10.2025 / 2.30 pm**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**14.10.2025 / 2.30 pm**

**<><*<><>*><>**

ಮುಖ್ಯಾಂಶಗಳು

೧. ಮಾಲೂರು ವಿಧಾನಸಭಾ ಚುನಾವಣಾ ಫಲಿತಾಂಶ- ಮರು ಮತ ಎಣಿಕೆಗೆ ಸುಪ್ರೀಂಕೋರ್ಟ್ ಆದೇಶ

೨. ಅಪರಾಧ ತಡೆಗಟ್ಟುವಲ್ಲಿ ರೈಲ್ವೆ ರಕ್ಷಣಾದಳದ ಪಾತ್ರ ಮಹತ್ತರ - ಕೇಂದ್ರ ಸಚಿವ ವಿ.ಸೋಮಣ್ಣ

೩. ಬೆಂಗಳೂರಿನ ನೃಪತುಂಗ ವಿಶ್ವವಿದ್ಯಾಲಯದಲ್ಲಿ ಶೈಕ್ಷಣಿಕ ಕಟ್ಟಡ ಲೋಕಾರ್ಪಣೆಗೊಳಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ

೪. ಬೆಂಗಳೂರು ರಸ್ತೆಗುಂಡಿ ಬಗ್ಗೆ ಉದ್ಯಮಿ ಕಿರಣ್ ಮಜುಂದಾರ್ ಶಾ ಸರ್ಕಾರದ ವಿರುದ್ಧ ಅಸಮಾಧಾನ

೫. ರಾಜ್ಯದ ವಿವಿಧೆಡೆ ಲೋಕಾಯುಕ್ತ ದಾಳಿ ; ಅಕ್ರಮ ಆಸ್ತಿ ಪರಿಶೀಲನೆ

**************

ಮಾಲೂರು ವಿಧಾನಸಭಾ ಕ್ಷೇತ್ರದ ಕಾಂಗ್ರೆಸ್ ಶಾಸಕ ಕೆ.ವೈ. ನಂಜೇಗೌಡ ಅವರನ್ನು ಅಸಿಂಧುಗೊಳಿಸಿ ಹೈಕೋರ್ಟ್ ನೀಡಿದ್ದ ಆದೇಶಕ್ಕೆ ಸುಪ್ರೀಂಕೋರ್ಟ್ ತಡೆಯಾಜ್ಞೆ ನೀಡಿದೆ. ಮರು ಮತ ಎಣಿಕೆಗೆ ನ್ಯಾಯಾಲಯ ಸೂಚನೆ ನೀಡಿದೆ. ಮತಗಳ ಮರುಎಣಿಕೆ ನಡೆಸಿ ಫಲಿತಾಂಶವನ್ನು ಮುಚ್ಚಿದ ಲಕೋಟೆಯಲ್ಲಿ ಸಲ್ಲಿಸುವಂತೆ ರಾಜ್ಯ ಮುಖ್ಯ ಚುನಾವಣಾಧಿಕಾರಿಗೆ ಸುಪ್ರೀಂಕೋರ್ಟ್ ಸೂಚನೆ ನೀಡಿದೆ. ಶಾಸಕ ಕೆ.ವೈ. ನಂಜೇಗೌಡ ಆಯ್ಕೆ ಅಸಿಂಧು ಎಂದು ಸೆಪ್ಟೆಂಬರ್ ೧೬ ರಂದು ತೀರ್ಪು ಪ್ರಕಟಿಸಿದ್ದ ಹೈಕೋರ್ಟ್, ಸುಪ್ರೀಂ ಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಲು ಒಂದು ತಿಂಗಳ

ಕಾಲಾವಕಾಶ ನೀಡಿತ್ತು. ಅಲ್ಲದೆ, ಮೇಲ್ಮನವಿ ಸಲ್ಲಿಸುವ ವರೆಗೆ ಆದೇಶವನ್ನು ತಟಸ್ಥವಾಗಿ ಇರಿಸುವಂತೆ ನಿರ್ದೇಶನ ನೀಡಿತ್ತು.

***************

ರೈಲ್ವೆ ರಕ್ಷಣಾ ದಳ ಕೇವಲ ಪ್ರಯಾಣಿಕರ ಸುರಕ್ಷತೆಗಾಗಿ ಮಾತ್ರವಲ್ಲ, ಅಪರಾಧಗಳನ್ನು ತಡೆಗಟ್ಟಲು ನಿರಂತರವಾಗಿ ಶ್ರಮಿಸುತ್ತಿದೆ ಎಂದು ಕೇಂದ್ರ ರೈಲ್ವೆ ಮತ್ತು ಜಲಶಕ್ತಿ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ತಿಳಿಸಿದ್ದಾರೆ. ನೈರುತ್ಯ ರೈಲ್ವೆಯ ಬೆಂಗಳೂರು ವಿಭಾಗದ ರೈಲ್ವೆ ರಕ್ಷಣಾ ದಳ ಮತ್ತು ರಾಷ್ಟ್ರೀಯ ಮಹಿಳಾ ಆಯೋಗದ ವತಿಯಿಂದ ಬೆಂಗಳೂರಿನಲ್ಲಿಂದು ನಡೆದ ಮಾನವ ಕಳ್ಳಸಾಗಣೆ ವಿರೋಧಿ ಕಾರ್ಯಾಗಾರದಲ್ಲಿ ಮಾತನಾಡಿದ ಅವರು ಕೇಂದ್ರ ಸರ್ಕಾರ ಮಹಿಳೆಯರ ಸುರಕ್ಷತೆಗೆ ಹೆಚ್ಚಿನ ಆದ್ಯತೆ ನೀಡುತ್ತಿದೆ ಎಂದು ಹೇಳಿದ್ದಾರೆ. ರೈಲ್ವೆ ನೇಮಕ ಪರೀಕ್ಷೆಗಳನ್ನು ಕನ್ನಡದಲ್ಲೂ ನಡೆಸಲಾಗುತ್ತಿದೆ ಎಂದು ತಿಳಿಸಿದ್ದಾರೆ.

**ಧ್ವನಿ - ಸಚಿವ ವಿ.ಸೋಮಣ್ಣ ( 32 ಸೆಕೆಂಡುಗಳು)**

ರಾಷ್ಟ್ರೀಯ ಮಹಿಳಾ ಆಯೋಗದ ಅಧ್ಯಕ್ಷೆ ವಿಜಯ ಕೆ. ರೆಹತ್ಕರ್ ಮಾತನಾಡಿ, ಮಾನವ ಕಳ್ಳಸಾಗಣೆ ಕೇವಲ ಅಪರಾಧವಲ್ಲ. ಅದು ಮಾನವೀಯತೆಯ ಮೇಲಿನ ದಾಳಿಯಾಗಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ. ರೈಲುಗಳಲ್ಲಿ ಏಕಾಂಗಿಯಾಗಿ ಪ್ರಯಾಣಿಸುವ ಮಹಿಳೆಯರ ಹೆಚ್ಚಿನ ಸುರಕ್ಷತೆಗಾಗಿ ರೈಲ್ವೆ ರಕ್ಷಣಾ ದಳವು ಸಿಬ್ಬಂದಿ ನಿಯೋಜಿಸುತ್ತಿದೆ ಎಂದು ತಿಳಿಸಿದ್ದಾರೆ.

***************

ವೈಜ್ಞಾನಿಕ ಮನೋಭಾವ ಮತ್ತು ವಿಜ್ಞಾನದ ಶಿಕ್ಷಣ ಸಮಾಜದ ಮತ್ತು ದೇಶದ ಪ್ರಗತಿಗೆ ಅತ್ಯಗತ್ಯ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅಭಿಪ್ರಾಯಪಟ್ಟಿದ್ದಾರೆ. ಬೆಂಗಳೂರಿನಲ್ಲಿಂದು ನೃಪತುಂಗ ವಿಶ್ವವಿದ್ಯಾಲಯದಲ್ಲಿ ರೂಸಾ ಯೋಜನೆಯಡಿ ನಿರ್ಮಿಸಿರುವ ನೂತನ ಕಟ್ಟಡ ಉದ್ಘಾಟಿಸಿ ಮಾತನಾಡಿದ ಅವರು, ಸಮಾಜದಲ್ಲಿ ಇಂದಿಗೂ ಮೌಢ್ಯ ಹೋಗಿಲ್ಲ ಎಂದು ವಿಷಾದ ವ್ಯಕ್ತಪಡಿಸಿದರು. ವಿಜ್ಞಾನ ಓದಿದವರಿಗೆ ವೈಜ್ಞಾನಿಕ ಮನೋಭಾವ ಇಲ್ಲದಿರುವುದು ದುರಂತ

ಎಂದು ಹೇಳಿದರು. ಸುಮಾರು ೫೨ ಕೋಟಿ ರೂಪಾಯಿ ಅಂದಾಜಿನಲ್ಲಿ ೭ ಅಂತಸ್ತಿನ ನೂತನ ಕಟ್ಟಡ ನಿರ್ಮಿಸಲಾಗಿದ್ದು, ಲನೇ ಅಂತಸ್ತು ನಿರ್ಮಿಸಲು ೮ ಕೋಟಿ ರೂಪಾಯಿ ಬೇಡಿಕೆ ಸಲ್ಲಿಸಲಾಗಿದೆ. ಸರ್ಕಾರ ಇದನ್ನು ನೀಡಲು ಸಿದ್ಧವಿದೆ ಎಂದು ಘೋಷಿಸಿದರು.

***************

ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಧಾರವಾಡದಲ್ಲಿ ಇಂದು ಸಂಜೆ ಧರ್ತಿ ಬಯೋನೆಸ್ಟ್ ಇನ್ ಕ್ಯೂಬೇಷನ್ ಕೇಂದ್ರದ ಉದ್ಘಾಟನೆ ನೆರವೇರಿಸಲಿದ್ದಾರೆ. ಬಳಿಕ ಅವರು ಐಐಟಿ ಧಾರವಾಡದ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಲಿದ್ದಾರೆ. ಬಯೋನೆಸ್ಟ್ ಇನ್ ಕ್ಯೂಬೇಷನ್ ಕೇಂದ್ರವನ್ನು ಸ್ಥಳೀಯ ಪ್ರದೇಶ ಅಭಿವೃದ್ಧಿ ಮತ್ತು ಬಿಐಆರ್‌ಎಸಿ ಯೋಜನೆಯಡಿಯಲ್ಲಿ ಅಭಿವೃದ್ಧಿಪಡಿಸಲಾಗಿದೆ. ನಿರ್ಮಲಾ ಸೀತಾರಾಮನ್ ಅವರ ಸಂಸದರ ಸ್ಥಳೀಯ ಪ್ರದೇಶ ಅಭಿವೃದ್ಧಿ ಯೋಜನೆಯಡಿಯಲ್ಲಿ ೫ ಕೋಟಿ ೨೯ ಲಕ್ಷ ರೂಪಾಯಿ ಸಹಾಯಧನ ಮತ್ತು ಭಾರತ ಸರ್ಕಾರದ ಜೈವಿಕ ತಂತ್ರಜ್ಞಾನ ಇಲಾಖೆಯಡಿಯಲ್ಲಿ ಬಯೋಟೆಕ್ನಾಲಜಿ ಇಂಡಸ್ಟ್ರಿ ರಿಸರ್ಚ್ ಅಸಿಸ್ಟೆನ್ಸ್ ಕೌನ್ಸಿಲ್‌ನಿಂದ ೫ ಕೋಟಿ ರೂಪಾಯಿ ಸಹಾಯಧನದೊಂದಿಗೆ ಈ ಕೇಂದ್ರವನ್ನು ಸ್ಥಾಪಿಸಲಾಗಿದೆ.

***************

ಬೆಂಗಳೂರಿನ ರಸ್ತೆ ಗುಂಡಿಗಳ ಬಗ್ಗೆ ಬಯೋಕಾನ್ ಮುಖ್ಯಸ್ಥೆ ಕಿರಣ್ ಮಜುಂದಾರ್ ಶಾ ಮತ್ತೊಮ್ಮೆ ಸಾಮಾಜಿಕ ಜಾಲತಾಣದಲ್ಲಿ ಅಸಮಾಧಾನ ವ್ಯಕ್ತ ಪಡಿಸಿದ್ದಾರೆ. ಈ ಪೋಸ್ಟನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮತ್ತು ಸಚಿವ ಪ್ರಿಯಾಂಕ್ ಖರ್ಗೆಗೆ ಟ್ಯಾಗ್ ಮಾಡಿದ್ದಾರೆ. ಕಿರಣ್ ಮಜುಂದಾರ್ ಶಾ ಪೋಸ್ಟ್ ಬಗ್ಗೆ ಸಚಿವ ಪ್ರಿಯಾಂಕ್ ಖರ್ಗೆ ಪ್ರತಿಕ್ರಿಯಿಸಿದ್ದು, ಸಮಸ್ಯೆಗಳ ಬಗ್ಗೆ ಅವರು ಕರೆಮಾಡಿ ಸರ್ಕಾರದ ಜೊತೆ ಮಾತನಾಡಬಹುದು ಎಂದು ತಿಳಿಸಿದ್ದಾರೆ. ಬೆಂಗಳೂರು ಅವರಿಗೆ ಎಲ್ಲವೂ ನೀಡಿದೆ ಎಂದು ಬೃಹತ್ ಕೈಗಾರಿಕೆ ಸಚಿವ ಎಂ.ಬಿ.ಪಾಟೀಲ್ ಪ್ರತಿಕ್ರಿಯಿಸಿದ್ದಾರೆ.

***************

ಬೆಂಗಳೂರು ಸೇರಿದಂತೆ ರಾಜ್ಯದ ವಿವಿಧೆಡೆ ಲೋಕಾಯುಕ್ತ ಅಧಿಕಾರಿಗಳು ಒಟ್ಟು ೧೨ ಸ್ಥಳಗಳಲ್ಲಿ ಏಕಕಾಲಕ್ಕೆ ದಾಳಿ ನಡೆಸಿದ್ದಾರೆ, ಬೆಂಗಳೂರಿನಲ್ಲಿ ಮೂವರು ಸರ್ಕಾರಿ ಅಧಿಕಾರಿಗಳ ಮನೆಗಳಲ್ಲಿ ಪರಿಶೀಲನೆ ನಡೆಸಿದ್ದಾರೆ. ಬೆಂಗಳೂರಿನ ಮಲ್ಲಸಂದ್ರ ಹೆರಿಗೆ ಆಸ್ಪತ್ರೆಯ ವೈದ್ಯಾಧಿಕಾರಿ ಮಂಜುನಾಥ್, ವಿಶೇಷ ಭೂಸ್ವಾಧೀನ ಅಧಿಕಾರಿ ಗಂಗಾಮರಿಗೌಡ, ಕರ್ನಾಟಕ ಪ್ರೌಢ ಶಿಕ್ಷಣ ಮಂಡಳಿಯ ಮಾಜಿ ನಿರ್ದೇಶಕಿ ಸುಮಂಗಲಿ ಅವರ ನಿವಾಸದ ಮೇಲೆ ಸುಮಾರು ೨೦ಕ್ಕೂ ಹೆಚ್ಚು ಅಧಿಕಾರಿಗಳು ದಾಳಿ ನಡೆಸಿ ಪರಿಶೀಲಿಸುತ್ತಿದ್ದಾರೆ.  ಉಡುಪಿ ಆರ್.ಟಿ.ಒ. ಅಧಿಕಾರಿ ಎಲ್.ಪಿ.ನಾಯಕ್, ಚಿತ್ರದುರ್ಗ ಜಿಲ್ಲೆಯ ಕೃಷಿ ಇಲಾಖೆಯ ಸಹಾಯಕ ನಿರ್ದೇಶಕ ಚಂದ್ರಕುಮಾರ್ ಅವರ ನಿವಾಸ ಸೇರಿದಂತೆ ರಾಜ್ಯದ ವಿವಿಧೆಡೆ ರಾಜ್ಯದ ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸಿದ್ದಾರೆ.

***************

ಹಾಸನದ ಹಾಸನಾಂಬೆ ದೇವಿಯ ದರ್ಶನಕ್ಕೆ ನಾಡಿನೆಲ್ಲೆಡೆಯಿಂದ ಸಾಗರೋಪಾದಿಯಲ್ಲಿ ಭಕ್ತರು ಆಗಮಿಸುತ್ತಿದ್ದಾರೆ. ನಿನ್ನೆ ಬೆಳಿಗ್ಗೆ ೫ ಗಂಟೆಯಿಂದ ಇಂದು ಬೆಳಿಗ್ಗೆ ೫ ಗಂಟೆಯವರೆಗೆ ದೇವಾಲಯಕ್ಕೆ ದಾಖಲೆಯ ಸಂಖ್ಯೆಯಲ್ಲಿ ಭಕ್ತರು ಆಗಮಿಸಿದ್ದಾರೆ ಎಂದು ಕಂದಾಯ ಸಚಿವ ಕೃಷ್ಣ ಬೈರೇಗೌಡ ತಿಳಿಸಿದ್ದಾರೆ. ದೇವಾಲಯ ಮುಚ್ಚಲು ನೀಡಲಾದ ಅವಧಿಯಲ್ಲೂ ಸಹ ದೇವರ ದರ್ಶನಕ್ಕೆ ಅನುಕೂಲ ಮಾಡಿಕೊಡಲಾಗಿದೆ. ಬೆಳಗಿನ ಜಾವ ೨ ರಿಂದ, ಬೆಳಿಗ್ಗೆ ೫ ರವರೆಗೆ ದರ್ಶನಕ್ಕೆ ಅವಕಾಶ ನೀಡಲಾಗಿದೆ. ಶುಕ್ರವಾರದಿಂದ, ಸೋಮವಾರ ರಾತ್ರಿಯವರೆಗೆ ಒಟ್ಟು ೬ ಲಕ್ಷದ ೪ ಸಾವಿರ ಮಂದಿ  ದರ್ಶನ ಪಡೆದಿದ್ದಾರೆ. ಪ್ರಸ್ತುತ ೨೪ ಗಂಟೆಗಳಲ್ಲಿ, ೨ ಲಕ್ಷದ ೨೯ ಸಾವಿರ ಜನರು ದರ್ಶನ ಪಡೆದಿರುವುದು ಹೆಮ್ಮೆಯ ಸಂಗತಿ ಎಂದು ತಿಳಿಸಿದ್ದಾರೆ.

***************

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ ತಾಲ್ಲೂಕಿನ ಜಾಲಿಗೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ತಿಂಡ್ಲು ಗ್ರಾಮದಲ್ಲಿ ಮೂರ್ತಿ ಟ್ರಸ್ಟ್ ವತಿಯಿಂದ ನಿರ್ಮಿಸಿರುವ ನಮ್ಮೂರ ಸರ್ಕಾರಿ ಹಿರಿಯ ಪ್ರಾಥಮಿಕ ಪಾಠಶಾಲೆಯ ನೂತನ ಕಟ್ಟಡವನ್ನು ಜಿಲ್ಲಾ ಉಸ್ತುವಾರಿ ಸಚಿವ ಕೆ.ಹೆಚ್.ಮುನಿಯಪ್ಪ ಹಾಗೂ ರಾಜ್ಯಸಭಾ ಸದಸ್ಯೆ ಹಾಗೂ ಮೂರ್ತಿ ಟ್ರಸ್ಟ್ ಅಧ್ಯಕ್ಷರಾದ ಸುಧಾಮೂರ್ತಿ ಉದ್ಘಾಟಿಸಿದರು. ಸಚಿವ ಕೆ.ಎಚ್. ಮುನಿಯಪ್ಪ ಮಾತನಾಡಿ, ಕಂಪನಿಗಳ ಸಿಎಸ್ಆರ್ ನಿಧಿಯಡಿ, ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಶಾಲೆಗಳನ್ನು ಉನ್ನತೀಕರಿಸಲಾಗುತ್ತಿದೆ. ಈ ಮೂಲಕ ಗ್ರಾಮೀಣ ವಿದ್ಯಾರ್ಥಿಗಳಿಗೂ ಉತ್ತಮ ಶಿಕ್ಷಣ ದೊರೆಯಬೇಕಿದೆ ಎಂದು ತಿಳಿಸಿದ್ದಾರೆ.

***************

ನಿನ್ನೆ ನಿಧನ ಹೊಂದಿದ ರಂಗಭೂಮಿ ಹಾಗೂ ಹಾಸ್ಯ ಕಲಾವಿದ, ಸಿನಿಮಾ ನಟ, ಧಾರವಾಡ ರಂಗಾಯಣದ ನಿರ್ದೇಶಕರಾಗಿದ್ದ ರಾಜು ತಾಳಿಕೋಟಿ ಅವರ ಪಾರ್ಥೀವ ಶರೀರವನ್ನು ಮಣಿಪಾಲ್ ಆಸ್ಪತ್ರೆಯಿಂದ ಅಂಬ್ಯುಲೆನ್ಸ್ ಮೂಲಕ ಧಾರವಾಡದ ರಂಗಾಯಣಕ್ಕೆ ತರಲಾಗಿದೆ. ರಂಗಾಯಣದ ಆವರಣದಲ್ಲಿ ಒಂದು ಗಂಟೆಗಳ ಕಾಲ ತಾಳಿಕೋಟಿ ಅವರ ಅಂತಿಮ ದರ್ಶನಕ್ಕೆ ಧಾರವಾಡ ಜಿಲ್ಲಾಡಳಿತ ವ್ಯವಸ್ಥೆ ಮಾಡಿತ್ತು. ಜಿಲ್ಲಾಧಿಕಾರಿ ದಿವ್ಯ ಪ್ರಭು, ಜಿಲ್ಲಾ ಪಂಚಾಯ್ತಿ ಕಾರ್ಯ ನಿರ್ವಹಣಾಧಿಕಾರಿ ಭುವನೇಶ್ ಪಾಟೀಲ, ಮೇಯರ್ ಜ್ಯೋತಿ ಪಾಟೀಲ ರಾಜು ತಾಳಿಕೋಟಿ ಅವರ ಅಂತಿಮ ದರ್ಶನ ಪಡೆದರು.

***************

ಪೋಷಕರು ತಮ್ಮ ಜವಾಬ್ದಾರಿಯನ್ನು ಅರ್ಥಮಾಡಿಕೊಂಡು, ಮಕ್ಕಳಿಗೆ ಸರಿ ತಪ್ಪು ಕಾರ್ಯಗಳ ಕುರಿತು ಅರಿವು ಮೂಡಿಸುವುದರಿಂದ ಮಕ್ಕಳ ಮೇಲೆ ನಡೆಯುವ ದೌರ್ಜನ್ಯಗಳನ್ನು ತಡೆಗಟ್ಟಲು ಸಾಧ್ಯ ಎಂದು ಉತ್ತರಕನ್ನಡ ಹಿರಿಯ ಸಿವಿಲ್ ನ್ಯಾಯಾಧೀಶೆ ಕವಿತಾ ಉಂಡೋಡಿ ತಿಳಿಸಿದ್ದಾರೆ.

***************